ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 2

ಉಪಾಧ್ಯಕ್ಷರು: "ಖಂಡ 2 ವಿಧೇಯಕದ ಅಂಗವಾಗಿರುತ್ತದೆ"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 2 ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಖಂಡ 1 ಇತ್ಯಾದಿ

ಉಪಾಧ್ಯಕ್ಷರು: ಪ್ರಸ್ತಾವ ಏನೆಂದರೆ

"ಮೊದಲನೆಯ ಖಂಡ, ಹೆಸರು ದೀರ್ಘ ಶೀಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರಸಂಹಿತೆಗಳು ವಿಧೇಯಕದ ಭಾಗವಾಗಿರುತ್ತದೆ"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೇ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಪ್ರಸ್ತಾವದ ಅಂಗೀಕಾರ

ಶ್ರೀ ಎಂ. ಮಹದೇವ್ (ಪಶುಸಂಗೋಪನೆ ಮತ್ತು ಸಕ್ಕರೆ ಸಚಿವರು): ಮಾನ್ಯ ಉಪಾಧ್ಯಕ್ಷರೆ, "2002ರ ಕರ್ನಾಟಕ ಕುರಿ ಮತ್ತು ಕುರಿ ಉತ್ಪನ್ನಗಳ ಅಭಿವೃದ್ಧಿ (ನಿರಸನ) ವಿಧೇಯಕವನ್ನು ಅಂಗೀಕರಿಸಬೇಕು ಕೋರುತ್ತೇನೆ."

ಉಪಾಧ್ಯಕ್ಷರು: ಪ್ರಸ್ತಾವ ಏನೆಂದರೆ

"2002ರ ಕರ್ನಾಟಕ ಕುರಿ ಮತ್ತು ಕುರಿ ಉತ್ಪನ್ನಗಳ ಅಭಿವೃದ್ಧಿ (ನಿರಸನ) ವಿಧೇಯಕವನ್ನು ಅಂಗೀಕರಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು

(ಇ) ಕರ್ನಾಟಕ ಪೌರನಿಗಮಗಳ (ಎರಡನೇ ತಿದ್ದುಪಡಿ) ವಿಧೇಯಕ, 2002

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಡಿ.ಬಿ. ಚಂದ್ರೇಗೌಡ (ಕಾನೂನು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು): ಮಾನ್ಯ ಉಪಾಧ್ಯಕ್ಷರೇ, "ವಿಧಾನ ಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ 2002ನೇ ಸಾಲಿನ ಪೌರನಿಗಮಗಳ (ಎರಡನೇ ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ".

ಪ್ರಸ್ತಾವವನ್ನು ಮಂಡಿಸಲಾಯಿತು

ಶ್ರೀ ಜಗದೀಶ್ ಶೆಟ್ಟರ್: ಮ್ಯಾನ್ಯ ಉಪಾಧ್ಯಕ್ಷರೆ, ನಿಯಮ 69ರಡಿ ಬರಗಾಲ ಮತ್ತು ಕುಡಿಯುವ ನೀರಿನ ಸಮಸ್ಯೆ ಕುರಿತಂತೆ ಚರ್ಚೆ ಅಪೂರ್ಣವಾಗಿರುವುದರಿಂದ ಮುಂದುವರೆಸುವುದಕ್ಕೆ ಅವಕಾಶ ಕಲ್ಪಿಸಿಕೊಡಬೇಕು.

ಉಪಾಧ್ಯಕ್ಷರು: ಕಳೆದೆರಡು ದಿವಸಗಳಿಂದ ಯಾವುದೇ ವಿಧೇಯಕಗಳನ್ನು ಪರ್ಯಾಲೋಚನೆಗೆ ತೆಗೆದುಕೊಂಡಿಲ್ಲ. ಬಿಎಸಿಯಲ್ಲಿ ತೀರ್ಮಾನವಾಗಿರುವಂತೆ ಎರಡು ವಿಧೇಯಕಗಳನ್ನಾದರೂ ಪರ್ಯಾಲೋಚನೆಗೆ ತೆಗೆದುಕೊಳ್ಳಬೇಕಾಗುತ್ತದೆ.

ಶ್ರೀ ಬಿ. ಸೋಮಶೇಖರ್: ಈ ಕುರಿತು ಸಾಕಷ್ಟು ಟೀಕೆ-ಟಿಪ್ಪಣಿಗಳು ಮತ್ತು ನ್ಯಾಯಾಲಯಗಳಿಂದ ಅನೇಕ ಬಾರಿ ಛೀಮಾರಿಗಳಾಗಿದೆ. ನೀವು ತರುತ್ತಿರುವ ಮಸೂದೆ ಬಹಳ ಒಳ್ಳೆಯದೆಂದು ನೀವು ಆತ್ಮ ಮುಟ್ಟಿಕೊಂಡು ಹೇಳುತ್ತೀರಾ? ದಯವಿಟ್ಟು ವಿತ್‌ಡ್ರಾ ಮಾಡಿಕೊಳ್ಳುವುದು ಒಳ್ಳೆಯದು. ಇದನ್ನು ಚರ್ಚೆಗೆ ತೆಗೆದುಕೊಳ್ಳುವುದು ಬೇಡ. Kindly withdraw it is in your own interest and in the interest of the Govt. ಇದರಿಂದ ಸರ್ಕಾರಕ್ಕೂ embarrassment ಆಗುವುದು ಬೇಡ. ದಯವಿಟ್ಟು ತರುತ್ತಿರುವ ಈ ವಿಧೇಯಕವನ್ನು ವಿತ್‌ಡ್ರಾ ಮಾಡುವುದು ಒಳ್ಳೆಯದು.

ಶ್ರೀ ಜಗದೀಶ್ ಶೆಟ್ಟರ್: ವಿಧೇಯಕ ಕುರಿತಂತೆ ನಾಳೆ ಚರ್ಚೆಗೆ ತೆಗೆದುಕೊಳ್ಳೋಣ. ಈಗ ನಿಯಮ 69ರಡಿ ಬರಗಾಲ ಮತ್ತು ಕುಡಿಯುವ ನೀರಿನ ಸಮಸ್ಯೆ ಕುರಿತಂತೆ ಚರ್ಚೆ ಮುಂದುವರಿಸಬೇಕು.

ಉಪಾಧ್ಯಕ್ಷರು: ಆಗಬಹುದು. 2002ನೇ ಸಾಲಿನ ಕರ್ನಾಟಕ ಪೌರನಿಗಮಗಳ (ಎರಡನೇ ತಿದ್ದುಪಡಿ) ವಿಧೇಯಕದ ಮೇಲಿನ ಚರ್ಚೆಯನ್ನು ನಾಳೆ ತೆಗೆದುಕೊಳ್ಳೋಣ.

(ಈ) ಕರ್ನಾಟಕ ಪಂಚಾಯತ್ ರಾಜ್(ತಿದ್ದುಪಡಿ) ವಿಧೇಯಕ, 2002

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಎಂ.ವೈ. ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು): ಮಾನ್ಯ ಉಪಾಧ್ಯಕ್ಷರೇ "2002 ನೇ ಸಾಲಿನ ಕರ್ನಾಟಕ ಪಂಚಾಯತ್ ರಾಜ್ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ"

ಶ್ರೀ ಜಗದೀಶ್ ಶೆಟ್ಟರ್: ಈ ವಿಧೇಯಕವನ್ನು ಜಂಟಿ ಸದನ ಸಮಿತಿಯ ಪರಿಶೀಲನೆಗೆ ಒಪ್ಪಿಸಬೇಕು.

ಶ್ರೀ ಎಂ.ವೈ. ಘೋರ್ಪಡೆ : ಈ ವಿಧೇಯಕವನ್ನು ಕಳೆದ ವರ್ಷ ಇಂಟ್ರಡ್ಯೂಸ್ ಮಾಡಲಾಗಿತ್ತು. ಇದರ ಬಗ್ಗೆ ಚರ್ಚೆ ಮಾಡದೆ ಜಂಟಿ ಸದನ ಸಮಿತಿಯ ಪರಿಶೀಲನೆಗೆ ರೆಫರ್ ಮಾಡುವುದಕ್ಕೆ ನಾನು ಒಪ್ಪಿದ್ದೇನೆ. ಈ ಪ್ರಸ್ತಾವವನ್ನು ಸದನದ ಅನುಮೋದನೆಗಾಗಿ ಮಂಡಿಸುತ್ತಿದ್ದೇನೆ.

ಶ್ರೀ ಜಗದೀಶ್ ಶೆಟ್ಟರ್: ಆಗಬಹುದು.

ಪರ್ಯಾಲೋಚನ ಪ್ರಸ್ತಾವ

"2002ನೇ ಸಾಲಿನ ಕರ್ನಾಟಕ ಪಂಚಾಯತರಾಜ್ (ತಿದ್ದುಪಡಿ) ವಿಧೇಯಕವನ್ನು ಜಂಟಿ ಸದನ ಸಮಿತಿಗೆ ಪರಿಶೀಲನೆಗಾಗಿ ಒಪ್ಪಿಸಲು ಈ ಸದನವು ತೀರ್ಮಾನಿಸುತ್ತದೆ."

ಪ್ರಸ್ತಾವ ಮಂಡಿಸಲ್ಪಟ್ಟಿತು

ಉಪಾಧ್ಯಕ್ಷರು: ಪ್ರಸ್ತಾವ ಏನೆಂದರೆ

"2002ನೇ ಸಾಲಿನ ಕರ್ನಾಟಕ ಪಂಚಾಯತ್ ರಾಜ್ (ತಿದ್ದುಪಡಿ) ವಿಧೇಯಕವನ್ನು ಜಂಟಿ ಸದನ ಸಮಿತಿಗೆ ಪರಿಶೀಲನೆಗಾಗಿ ಒಪ್ಪಿಸಲು ಈ ಸದನವು ತೀರ್ಮಾನಿಸುತ್ತದೆ"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಹಾಗೂ 2002ನೇ ಸಾಲಿನ ಕರ್ನಾಟಕ ಪಂಚಾಯತ್ ರಾಜ್ (ತಿದ್ದುಪಡಿ) ವಿಧೇಯಕವನ್ನು ಜಂಟಿ ಸದನ ಸಮಿತಿಗೆ ಪರಿಶೀಲನೆಗಾಗಿ ಒಪ್ಪಿಸಲಾಯಿತು.

2002ನೇ ಸಾಲಿನ ಕರ್ನಾಟಕ ಪಂಚಾಯತ್ ರಾಜ್ (ತಿದ್ದುಪಡಿ) ವಿಧೇಯಕವನ್ನು ಜಂಟಿ ಸದನ ಸಮಿತಿಯ ಪರಿಶೀಲನೆಗಾಗಿ ಒಪ್ಪಿಸಲಾಯಿತು.